National
Kannada
21.12.2025: 1310hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಅಸ್ಸಾಂನಲ್ಲಿ ೧೨ ಸಾವಿರ ಕೋಟಿ ರೂಪಾಯಿ ವೆಚ್ಚದ ರಸಗೊಬ್ಬರ ಘಟಕಕ್ಕೆ ಪ್ರಧಾನಿ ನರೇಂದ್ರ ಮೋದಿ ಭೂಮಿಪೂಜೆ

೨. ಸ್ಥಳೀಯ ಭಾಷೆಗಳಲ್ಲಿ ನ್ಯಾಯಾಲಯದ ತೀರ್ಪು ಪ್ರಕಟಣೆ ನಿಟ್ಟಿನಲ್ಲಿ ಕ್ರಮಕ್ಕೆ ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಕರೆ

೩. ಘೋಸ್ಟ್ ಪೇರಿಂಗ್ ಮೂಲಕ ಸೈಬರ್ ವಂಚನೆ ಬಗ್ಗೆ ಎಚ್ಚರಿಕೆ ವಹಿಸುವಂತೆ ವಾಟ್ಸ್‌ಅಪ್ ಬಳಕೆದಾರರಿಗೆ ಕೇಂದ್ರ ಸರ್ಕಾರ ಸೂಚನೆ

೪. ಮಹಿಳಾ ಟಿ-೨೦ ಕ್ರಿಕೆಟ್: ಸರಣಿಯ ಮೊದಲ ಪಂದ್ಯದಲ್ಲಿಂದು ಭಾರತ-ಶ್ರೀಲಂಕಾ ಹಣಾಹಣಿ

******************

ಅಸ್ಸಾಂನ ಗುವಾಹಟಿಯ ಪಶ್ಚಿಮ ಬೋರಗಾಂವ್‌ನಲ್ಲಿರುವ ಸ್ವಹಿದ್ ಸ್ಮಾರಕಕ್ಕೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿ, ಅಸ್ಸಾಂ ಚಳವಳಿಯ ಹುತಾತ್ಮರಿಗೆ ಗೌರವ ನಮನ ಸಲ್ಲಿಸಿದರು. ಪರೀಕ್ಷಾ ಪೇ ಚರ್ಚಾ ಕಾರ್ಯಕ್ರಮದ ಭಾಗವಾಗಿ ಗುವಾಹಟಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಅಸ್ಸಾಂ ೨೫ ಪ್ರತಿಭಾನ್ವಿತ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಬ್ರಹ್ಮಪುತ್ರ ನದಿಯಲ್ಲಿ ಕ್ರೂಸ್‌ನಲ್ಲಿ ಈ ಸಂವಾದ ನಡೆಸಲಾಯಿತು. ನಂತರ ಪ್ರಧಾನಿ ನರೇಂದ್ರ ಮೋದಿ ಅವರು ನಮ್ರುಪ್‌ನಲ್ಲಿಂದು ೧೨ ಸಾವಿರ ಕೋಟಿ ರೂಪಾಯಿ ವೆಚ್ಚದ ಅಮೋನಿಯಾ-ಯೂರಿಯಾ ರಸಗೊಬ್ಬರ ಯೋಜನೆಯ ಭೂಮಿ ಪೂಜೆಯನ್ನು ನೆರವೇರಿಸಿದರು. ಈ ವೇಳೆ ಅವರು, ನಮ್ರುಪ್‌ನಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೩೬ ಸೆಕೆಂಡ್ಸ್)

******************

ನ್ಯಾಯಾಲಯದ ತೀರ್ಪುಗಳನ್ನು ನಾಗರಿಕರಿಗೆ ಅವರ ಭಾಷೆಗಳಲ್ಲೇ ತಲುಪುವಂತೆ ನೋಡಿಕೊಳ್ಳಲು ಎಲ್ಲಾ ಸಾಂವಿಧಾನಿಕ ಸಂಸ್ಥೆಗಳು ಸಂವಿಧಾನದ ಆಶಯದೊಂದಿಗೆ ಕೆಲಸ ಮಾಡಬೇಕು ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಕರೆ ನೀಡಿದ್ದಾರೆ. ಉತ್ತರ ಪ್ರದೇಶದ ಇಟಾವಾದಲ್ಲಿ ನಡೆದ ಹಿಂದಿ ಸೇವಾ ಟ್ರಸ್ಟ್‌ನ ೩೩ನೇ ವಾರ್ಷಿಕೋತ್ಸವ

ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಭಾಷೆಗೆ ಸಂಬಂಧಿಸಿದ ಸಾಂವಿಧಾನಿಕ ನಿಬಂಧನೆಗಳನ್ನು ದೇಶಾದ್ಯಂತ ಜಾರಿಗೆ ನಿರೀಕ್ಷೆಯಿತ್ತು ಎಂದು ಹೇಳಿದ್ದಾರೆ. ಸಾಂವಿಧಾನಿಕ ಮತ್ತು ಕಾನೂನು ನಿಬಂಧನೆಗಳ ಪ್ರಕಾರ, ಇಂಗ್ಲಿಷ್ ಭಾಷೆಯು ಸುಪ್ರೀಂಕೋರ್ಟ್ ಅಧಿಕೃತ ಭಾಷೆಯಾಗಿ ಉಳಿದಿದ್ದರೂ, ಭಾಷೆಗಳ ನಡುವಿನ ಅಂತರವನ್ನು ನಿವಾರಿಸಲು ಈಗಾಗಲೇ ಮಹತ್ವದ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ. ಸುಪ್ರೀಂಕೋರ್ಟ್ ತೀರ್ಪುಗಳನ್ನು ೧೯ ಭಾಷೆಗಳಿಗೆ ಅನುವಾದಿಸಲು ಪ್ರಾರಂಭಿಸಲಾಗಿದೆ. ದೇಶದ ಯಾವುದೇ ನಾಗರಿಕನು ತನ್ನ ರಾಜ್ಯದ ಭಾಷೆಯಲ್ಲಿ ಅಧಿಕೃತ ಅನುವಾದಿತ ಪ್ರತಿಯನ್ನು ಓದಲು ಇದರಿಂದ ಸಾಧ್ಯವಾಗುತ್ತದೆ ಎಂದು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹೇಳಿದ್ದಾರೆ.

******************

ಇಂದು ಜಗತ್ತಿನಾದ್ಯಂತ ವಿಶ್ವ ಧ್ಯಾನ ದಿನವನ್ನು ಆಚರಿಸಲಾಗುತ್ತಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಕಳೆದ ವರ್ಷ ಡಿಸೆಂಬರ್ ೨೧ ಅನ್ನು ವಿಶ್ವ ಧ್ಯಾನ ದಿನ ಎಂದು ಘೋಷಿಸಲಾಯಿತು. ಹೈದರಾಬಾದ್‌ನ ಹಾರ್ಟ್‌ಫುಲ್‌ನೆಸ್ ಗ್ಲೋಬಲ್ ಪ್ರಧಾನ ಕಚೇರಿಯಲ್ಲಿ ನಡೆಯುವ ವಿಶ್ವ ಧ್ಯಾನ ದಿನಾಚರಣೆಯಲ್ಲಿ ಉಪ ರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮುಖ್ಯ ಅತಿಥಿಯಾಗಿದ್ದಾರೆ. ನ್ಯೂಯಾರ್ಕ್‌ನಲ್ಲಿ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ 'ಜಾಗತಿಕ ಶಾಂತಿ ಮತ್ತು ಸಾಮರಸ್ಯಕ್ಕಾಗಿ ಧ್ಯಾನ' ಕಾರ್ಯಕ್ರಮದಲ್ಲಿ ವಿಶ್ವಸಂಸ್ಥೆಯ ಅಧಿಕಾರಿಗಳು, ವಿವಿಧ ದೇಶಗಳ ರಾಜತಾಂತ್ರಿಕರು ಮತ್ತು ಯೋಗಪಟುಗಳು ಭಾಗವಹಿಸಿದ್ದರು. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯವನ್ನು ಪ್ರಾಯೋಜಿಸಿದ ಭಾರತ, ನೇಪಾಳ, ಮೆಕ್ಸಿಕೊ, ಶ್ರೀಲಂಕಾ ಮತ್ತು ಅಂಡೋರಾ ದೇಶಗಳು ಈ ಕಾರ್ಯಕ್ರಮವನ್ನು ಆಯೋಜಿಸಿವೆ.

******************

ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ 'ಘೋಸ್ಟ್ ಪೇರಿಂಗ್' ಎಂಬ ಹೊಸ ಮಾದರಿಯ ಸೈಬರ್ ವಂಚನೆಯ ಬಗ್ಗೆ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ. ವಾಟ್ಸಾಪ್ ಬಳಕೆದಾರರನ್ನು ಗುರಿಯಾಗಿಸಿಕೊಂಡಿರುವ ಈ ಜಾಲದಲ್ಲಿ, ಹ್ಯಾಕರ್‌ಗಳು ಅಪ್ಲಿಕೇಶನ್‌ನ 'ಡಿವೈಸ್ ಲಿಂಕಿಂಗ್' ವೈಶಿಷ್ಟ್ಯವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಯಾವುದೇ ಹೆಚ್ಚಿನ ದೃಢೀಕರಣವಿಲ್ಲದೆ, ಕೇವಲ ಪೇರಿಂಗ್ ಕೋಡ್‌ಗಳ ಮೂಲಕ ಬಳಕೆದಾರರ ಖಾತೆಗಳನ್ನು ಹೈಜಾಕ್ ಮಾಡುತ್ತಿರುವ ಕುರಿತು ಎಚ್ಚರಿಕೆ ನೀಡಲಾಗಿದೆ. ವಂಚಕರ ಜಾಲತಾಣ ಪ್ರವೇಶಿಸುವ ಅಪರಿಚಿತ ಅಥವಾ ಅಸುರಕ್ಷಿತ ಲಿಂಕ್ ಕ್ಲಿಕ್ ಮಾಡಿ, ಅಲ್ಲಿ ಕೇಳಲಾಗುವ ದೃಡೀಕರಣದಲ್ಲಿ ಫೋನ್ ಸಂಖ್ಯೆ ನಮೂದಿಸಿದ್ದಲ್ಲಿ, ವಂಚಕರು ಸುಲಭವಾಗಿ ವಾಟ್ಸಾಪ್ ಖಾತೆಯನ್ನು ತಮ್ಮ ಸಾಧನಗಳಿಗೆ ಲಿಂಕ್ ಮಾಡಿಕೊಳ್ಳಲು ಸಾಧ್ಯವಾಗುತ್ತದೆ. ಸಾರ್ವಜನಿಕರು ಇಂತಹ ಯಾವುದೇ ಅನುಮಾನಾಸ್ಪದ

ಲಿಂಕ್‌ಗಳ ಮೇಲೆ ಕ್ಲಿಕ್ ಮಾಡಬಾರದು ಮತ್ತು ಯಾವುದೇ ಅನುಮಾನಾಸ್ಪದ ಜಾಲತಾಣಗಳಲ್ಲಿ ತಮ್ಮ ಮೊಬೈಲ್ ಸಂಖ್ಯೆಯನ್ನು ನಮೂದಿಸಬಾರದು ಎಂದು ಸಚಿವಾಲಯ ಮನವಿ ಮಾಡಿದೆ. ಸುರಕ್ಷತೆಯ ದೃಷ್ಟಿಯಿಂದ ಬಳಕೆದಾರರು ತಮ್ಮ ವಾಟ್ಸಾಪ್ ಸೆಟ್ಟಿಂಗ್ಸ್‌ನಲ್ಲಿರುವ 'ಲಿಂಕ್ಡ್ ಡಿವೈಸ್' ವಿಭಾಗವನ್ನು ಕಾಲಕಾಲಕ್ಕೆ ಪರಿಶೀಲಿಸಿ, ಅಪರಿಚಿರತ ಸಾಧನಗಳನ್ನು ಲಾಗ್ ಔಟ್ ಮಾಡಬೇಕು ಎಂದು ಸಚಿವಾಲಯ ತಿಳಿಸಿದೆ.

*****************

ಉತ್ತರ ಭಾರತದ ಕೆಲವು ಭಾಗಗಳಲ್ಲಿ ದಟ್ಟವಾದ ಮಂಜು ಕವಿದಿರುವುದರಿಂದ ಗೋಚರತೆಯ ಮೇಲೆ ಪರಿಣಾಮ ಬೀರಿದ್ದು, ಇದರಿಂದ ಕೆಲವು ವಿಮಾನ ನಿಲ್ದಾಣಗಳಲ್ಲಿ ವಿಮಾನಗಳ ಕಾರ್ಯಾಚರಣೆಯಲ್ಲಿ ವಿಳಂಬವಾಗಿದೆ ಅಥವಾ ಬದಲಾವಣೆಯಾಗಿದೆ ಎಂದು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ತಿಳಿಸಿದೆ. ಈ ವಿಮಾನ ನಿಲ್ದಾಣಗಳಲ್ಲಿ ಪ್ರಯಾಣಿಕರ ಸಹಾಯಕ್ಕಾಗಿ ತಂಡಗಳನ್ನು ನಿಯೋಜಿಸಲಾಗಿದೆ. ವಿಮಾನ ಕಾರ್ಯಚರಣೆ ಕುರಿತು ಅಧಿಕೃತ ಮಾಹಿತಿಗಾಗಿ ಪ್ರಯಾಣಿಕರು ತಮ್ಮ ವಿಮಾನಯಾನ ಸಂಸ್ಥೆಗಳೊಂದಿಗೆ ಸಂಪರ್ಕದಲ್ಲಿರುವಂತೆ ಪ್ರಾಧಿಕಾರ ಮನವಿ ಮಾಡಿದೆ.

*****************

ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ 'ಫಿಟ್ ಇಂಡಿಯಾ' ಉಪಕ್ರಮದಡಿಯಲ್ಲಿ, ಸಂಡೇಸ್ ಆನ್ ಸೈಕಲ್' ಅಭಿಯಾನದ ಮೊದಲ ವಾರ್ಷಿಕೋತ್ಸವವನ್ನು ಪುದುಚೇರಿಯಲ್ಲಿ ಇಂದು ಆಚರಿಸಲಾಯಿತು. ಯುವಕರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿರುವ ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ನೇತೃತ್ವದ ಸೈಕಲ್ ರ್ಯಾಲಿಗೆ ಪುದುಚೇರಿ ಲೆಫ್ಟಿನೆಂಟ್ ಗವರ್ನರ್ ಕೆ. ಕೈಲಾಶ್ನಾಥನ್ ಮತ್ತು ಮುಖ್ಯಮಂತ್ರಿ ಎನ್. ರಂಗಸಾಮಿ ಚಾಲನೆ ನೀಡಿದರು. ಪುದುಚೇರಿ ವಿಧಾನಸಭಾ ಸ್ಪೀಕರ್ ಆರ್. ಸೆಲ್ವಂ, ಗೃಹ ಸಚಿವ ಎ. ನಮ ಶಿವಾಯಂ, ಮುಖ್ಯ ಕಾರ್ಯದರ್ಶಿ ಡಾ.ಶರತ್ ಚೌಹಾಣ್ ಮತ್ತು ಖೇಲ್ ರತ್ನ ಪ್ರಶಸ್ತಿ ಪುರಸ್ಕೃತರಾದ ಪಿ. ಆರ್. ರಾಜೇಶ್ ಮತ್ತು ಶರತ್ ಕಮಲ್ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ, ಫಿಟ್ ಇಂಡಿಯಾ ಅಪ್ಲಿಕೇಶನ್ ಮೂಲಕ ಗರಿಷ್ಠ ಸೈಕ್ಲಿಂಗ್ ದೂರವನ್ನು ಕ್ರಮಿಸಿದ ಅಗ್ರ ಮೂರು ಸಾಧಕರಿಗೆ ಸೈಕಲ್‌ಗಳನ್ನು ನೀಡಿ ಗೌರವಿಸಲಾಯಿತು.

*****************

ದಕ್ಷಿಣ ಆಫ್ರಿಕಾದ ವೆಸ್ಟ್‌ರಾಂಡ್ ಪ್ರದೇಶದಲ್ಲಿಂದು ಶಸ್ತ್ರಸಜ್ಜಿತ ದಾಳಿಕೋರರು ಗುಂಡು ಹಾರಿಸಿದ ಪರಿಣಾಮ, ಕನಿಷ್ಠ ಒಂಬತ್ತು ಮಂದಿ ಮೃತಪಟ್ಟಿದ್ದು, ಅನೇಕರು ಗಾಯಗೊಂಡಿದ್ದಾರೆ. ದಕ್ಷಿಣ ಆಫ್ರಿಕಾದ ಅತಿದೊಡ್ಡ ನಗರ ಮತ್ತು ಅದರ ಪ್ರಮುಖ ಆರ್ಥಿಕ ಕೇಂದ್ರವಾದ ಜೋಹಾನ್ಸ್‌ಬರ್ಗ್ ಬಳಿಯ ಪಟ್ಟಣದಲ್ಲಿ ಈ ಘಟನೆ ಸಂಭವಿಸಿದೆ. ಘಟನೆ ಕುರಿತು ತನಿಖೆ ಪ್ರಗತಿಯಲ್ಲಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

*****************

ಮಹಿಳಾ ಕ್ರಿಕೆಟ್‌ನಲ್ಲಿ, ಭಾರತ ತಂಡ ಇಂದು, ವಿಶಾಖಪಟ್ಟಣದ ಡಾ.ವೈ.ಎಸ್. ರಾಜಶೇಖರ ರೆಡ್ಡಿ ಎಸಿಎ-ವಿಡಿಸಿಎ ಕ್ರೀಡಾಂಗಣದಲ್ಲಿ ನಡೆಯುವ ೫ ಪಂದ್ಯಗಳ ಸರಣಿಯ ಮೊದಲ ಟಿ-೨೦ ಅಂತಾರಾಷ್ಟ್ರೀಯ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಸೆಣಸಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಹರ್ಮನ್‌ಪ್ರೀತ್ ಕೌರ್ ನೇತೃತ್ವದಲ್ಲಿ, ಭಾರತ ತಂಡ, ಮಹಿಳಾ ಟಿ-೨೦ ವಿಶ್ವಕಪ್ ಸಿದ್ಧತೆಯ ಭಾಗವಾಗಿ ಶ್ರೀಲಂಕಾ ವಿರುದ್ಧ ಐದು ಟಿ-೨೦ ಪಂದ್ಯಗಳನ್ನು ಆಡಲಿದೆ. ಮೊದಲ ಎರಡು ಪಂದ್ಯಗಳು ವಿಶಾಖಪಟ್ಟಣದಲ್ಲಿ ನಡೆಯಲಿದ್ದು, ಕೊನೆಯ ಮೂರು ಪಂದ್ಯಗಳು ತಿರುವನಂತಪುರದಲ್ಲಿ ನಡೆಯಲಿವೆ.

*****************

ದುಬೈನ ಐಸಿಸಿ ಅಕಾಡೆಮಿ ಮೈದಾನದಲ್ಲಿ ಇಂದು ನಡೆಯುತ್ತಿರುವ ೨೦೨೫ರ ಎಸಿಸಿ ೧೯ ವರ್ಷದೊಳಗಿನ ಪುರುಷರ ಏಷ್ಯಾ ಕಪ್‌ನ ಏಕದಿನ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ಪಾಕಿಸ್ತಾನದ ವಿರುದ್ಧ ಟಾಸ್ ಗೆದ್ದಿರುವ ಭಾರತ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತಿಚಿನ ವರದಿ ಬಂದಾಗ ಪಾಕಿಸ್ತಾನ **35** ಓವರ್‌ಗಳಲ್ಲಿ **2** ವಿಕೆಟ್ ನಷ್ಟಕ್ಕೆ **240** ರನ್ ಮಾಡಿ ಆಡುತ್ತಿದೆ.

*****************

ಮುಂಬರುವ ಐಸಿಸಿ ವಿಶ್ವಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಗಾಗಿ ಭಾರತೀಯ ಕ್ರಿಕೆಟ್ ಮಂಡಳಿ ೧೫ ಸದಸ್ಯರ ತಂಡ ಪ್ರಕಟಿಸಿದೆ. ಸೂರ್ಯಕುಮಾರ್ ಯಾದವ್ ತಂಡವನ್ನು ಮುನ್ನಡೆಸಲಿದ್ದು, ಶುಭ್‌ಮನ್ ಗಿಲ್ ಉಪನಾಯಕರಾಗಿದ್ದಾರೆ. ಸ್ಪಿನ್ನರ್ ಅಕ್ಷರ್ ಪಟೇಲ್ ಹಾಗೂ ವಿಕೆಟ್ ಕೀಪರ್ ಇಶಾನ್ ಕಿಶನ್ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಉಳಿದಂತೆ ಸಂಜು ಸ್ಯಾಮ್‌ಸ್ಯಾಂಗ್, ಅಭಿಷೇಕ್ ಶರ್ಮಾ, ರಿಂಕು ಸಿಂಗ್, ತಿಲಕ್ ವರ್ಮಾ, ಹಾರ್ದಿಕ್ ಪಾಂಡ್ಯಾ, ಶಿವಂ ದುಬೆ, ವಾಷಿಂಗ್ಟನ್ ಸುಂದರ್, ಕುಲ್‌ದೀಪ್ ಯಾದವ್, ವರುಣ್ ಚಕ್ರವರ್ತಿ, ಅರ್ಷ್‌ದೀಪ್ ಸಿಂಗ್, ಹರ್ಷಿತ್ ರಾಣಾ ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

*****************

ಚೀನಾದ ಹ್ಯಾಂಗ್‌ಝೌನಲ್ಲಿ ನಿನ್ನೆ ರಾತ್ರಿ ನಡೆದ ಬಿಡಬ್ಲ್ಯುಎಫ್ ವರ್ಲ್ಡ್ ಟೂರ್ ಬ್ಯಾಡ್ಮಿಂಟನ್ ಫೈನಲ್ಸ್ ೨೦೨೫ ರಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಕಂಚಿನ ಪದಕ ಗೆದ್ದಿದೆ. ಸೆಮಿಫೈನಲ್‌ನಲ್ಲಿ ಈ ಜೋಡಿ, ಚೀನಾದ ಲಿಯಾಂಗ್ ವೀ ಕೆಂಗ್ ಮತ್ತು ವಾಂಗ್ ಚಾಂಗ್ ವಿರುದ್ಧ ೧೦-೨೧, ೨೧-೧೭, ೨೧-೧೩ ಅಂಕಗಳಿಂದ ಸೋತರು. ಆದಾಗ್ಯೂ, ಇದು ಭಾರತೀಯ ಶಟ್ಲರ್‌ಗಳು ಗೆದ್ದ ಎರಡನೇ ಬಿಡಬ್ಲ್ಯುಎಫ್ ವರ್ಲ್ಡ್ ಟೂರ್ ಫೈನಲ್ಸ್ ಪದಕವಾಗಿದೆ. ೨೦೧೮ ರ ಆರಂಭದಲ್ಲಿ, ಪಿ.ವಿ.ಸಿಂಧು ಮಹಿಳಾ ಸಿಂಗಲ್ಸ್ ಪ್ರಶಸ್ತಿಯನ್ನು ಗೆದ್ದಿದ್ದರು ಮತ್ತು ಸ್ಪರ್ಧೆಯಲ್ಲಿ ಭಾರತದಿಂದ ಏಕೈಕ ಚಿನ್ನದ ಪದಕ ವಿಜೇತರಾದರು.

*****************